# ಕರ್ನಾಟಕ ಸರ್ಕಾರದ ನಡವಳಿಗಳು



**ವಿಷಯ:** ಕೃಷಿಯಲ್ಲಿ ಡಿಪ್ಲೊಮಾ, ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಲ್ಲಿನ ಪ್ರವೇಶದಲ್ಲಿ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 40 ರಷ್ಟು ಸೀಟುಗಳನ್ನು ಮೀಸಲಿಡುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಎಹೆಚ್‌ಡಿ 63 ಎಯುಎಂ 2003, ದಿನಾಂಕ: 10-07-2003.
2) ದಿನಾಂಕ: 05-07-2014ರ ಸರ್ಕಾರಿ ಆದೇಶ ಸಂಖ್ಯೆ: ಕೃಇ 22 ಕೃವಿವಿ 2014.

*** **** ***

**ಪ್ರಸ್ತಾವನೆ:**

ಮೇಲೆ(1)ರಲ್ಲಿ ಓದಲಾದ ದಿನಾಂಕ: 10-07-2003ರ ಆದೇಶದಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳ ಪ್ರವೇಶದಲ್ಲಿ ಕೃಷಿಕರ ಅಥವಾ ಅವರ ಮಕ್ಕಳಿಗಾಗಿ ಶೇ. 23.8 ರಷ್ಟು ಮೀಸಲಾತಿಯನ್ನು ನಿಗಧಿಪಡಿಸಲಾಗಿತ್ತು.

2. ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ: 14-02-2014ರಂದು ವಿಧಾನಮಂಡಲದಲ್ಲಿ ಮಂಡಿಸಿದ ಆಯವ್ಯಯದಲ್ಲಿ (ಆಯವ್ಯಯ ಭಾಷಣದ ಕಂಡಿಕೆ-34) ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಡಿಪ್ಲೊಮಾ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಿಗೆ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳ ಪ್ರವೇಶಕ್ಕೆ ಈಗಿರುವ ಮೀಸಲಾತಿ ಪ್ರಮಾಣವನ್ನು ಶೇ.40ಕ್ಕೆ ಹೆಚ್ಚಿಸಲಾಗುವುದು ಎಂಬುದಾಗಿ ಘೋಷಿಸಿರುತ್ತಾರೆ.

3. ಮೇಲೆ (2)ರಲ್ಲಿ ಓದಲಾದ ದಿನಾಂಕ: 05-07-2014ರ ಆದೇಶದಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ(ಕೃಷಿ) ಹಾಗೂ ತತ್ಸಮಾನ ಪದವಿಗಳ ಪ್ರವೇಶದಲ್ಲಿ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗಾಗಿ ನಿಗಧಿಪಡಿಸಲಾಗಿದ್ದ ಮೀಸಲಾತಿಯ ಪ್ರಮಾಣವನ್ನು ಶೇ.23.8ರಿಂದ ಶೇ.40ಕ್ಕೆ ಹೆಚ್ಚಿಸಲಾಗಿದೆ ಹಾಗೂ ಈ ಹೆಚ್ಚಳದ ಮೀಸಲಾತಿಯನ್ನು 2 ವರ್ಷದ ಡಿಪ್ಲೊಮಾ(ಕೃಷಿ) ಕಾರ್ಯಕ್ರಮಗಳಿಗೂ ಸಹ ವಿಸ್ತರಿಸಿ ಆದೇಶ ಹೊರಡಿಸಲಾಗಿದೆ.

4. ಸರ್ಕಾರವು ಮೇಲ್ಕಂಡ ಆದೇಶದಲ್ಲಿನ ಅಂಶಗಳನ್ನು ಪುನರ್ ಪರಿಶೀಲಿಸಿದೆ. ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ(ಕೃಷಿ), ತತ್ಸಮಾನ ಪದವಿ ಹಾಗೂ 2 ವರ್ಷದ ಡಿಪ್ಲೊಮಾ(ಕೃಷಿ) ಕೋರ್ಸ್‌ಗಳಿಗೆ ಗ್ರಾಮೀಣ ಪ್ರದೇಶದಲ್ಲಿ ಅಭ್ಯಾಸ ಮಾಡಿದ ರೈತರ ಮಕ್ಕಳಿಗೆ ಹೆಚ್ಚಿನ ಪ್ರಮಾಣದ ಸೀಟುಗಳು ಲಭ್ಯವಾಗಲು ಅನುವಾಗುವಂತೆ ಗ್ರಾಮೀಣ ಪ್ರದೇಶದಲ್ಲಿ ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 22 ಕೃವಿವಿ 2014
## ಬೆಂಗಳೂರು, ದಿನಾಂಕ: 21-08-2014.

5. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಕೃಇ 22 ಕೃವಿವಿ 2014 ದಿನಾಂಕ: 05-07-2014ರ ಆದೇಶವನ್ನು ಮುಂದುವರೆಸುತ್ತಾ, ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ(ಕೃಷಿ) ಹಾಗೂ ತತ್ಸಮಾನ ಪದವಿ ಮತ್ತು 2 ವರ್ಷದ ಡಿಪ್ಲೊಮಾ(ಕೃಷಿ)

ಕಾರ್ಯಕ್ರಮಗಳಿಗೆ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗಾಗಿ ಪ್ರವೇಶದಲ್ಲಿ ನಿಗದಿಪಡಿಸಿರುವ ಶೇ. 40ರ ಮೀಸಲಾತಿಯಡಿ ಆಯ್ಕೆ ಮಾಡುವ ಅಭ್ಯರ್ಥಿಗಳ ಪೈಕಿ ರೈತರ ಮಕ್ಕಳು ಗ್ರಾಮೀಣ ಪ್ರದೇಶದಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಯಾರು ಉತ್ತೀರ್ಣರಾಗಿರುತ್ತಾರೋ ಅವರಿಗೆ ಪ್ರಥಮ ಆದ್ಯತೆಯನ್ನು ನೀಡುವುದು. ಉಳಿದಂತೆ ಪಹಣಿ ಹೊಂದಿರುವ ಇತರೆ ರೈತರ ಮಕ್ಕಳಿಗೆ ನಂತರದ ಆದ್ಯತೆಯನ್ನು ನೀಡತಕ್ಕದೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು-ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಕೃಷಿ 'ಬಿ' ಶಾಖೆಗೆ ಒದಗಿಸಲು ಕೋರಿದೆ.

ಪ್ರತಿಗಳು:

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ)ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
3. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ನವಿಲೆ-ಶಿವಮೊಗ್ಗ.
4. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4-5), ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿ 1&2 ಇವರ ಆಪ್ತ ಸಹಾಯಕರು, ಕೃಷಿ ಇಲಾಖೆ.
9. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು.